## 79. ಕೃಷಿ ಸ್ಟಾರ್ಟಪ್‌ಗಳಿಂದ ಯುವಕರಿಗೆ ಹೊಸ ಅವಕಾಶ

ಕೃಷಿ ಕ್ಷೇತ್ರದ ನೂತನ ಆವಿಷ್ಕಾರಗಳು ರೈತರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಹಕಾರಿಯಾಗಿದ್ದು, ನವೀನ ಕೃಷಿ ತಂತ್ರಜ್ಞಾನವು ಕೃಷಿ ಕ್ಷೇತ್ರದಲ್ಲಿ ಯುವ ಸಮುದಾಯಕ್ಕೆ ಅವಕಾಶಗಳನ್ನು ಸೃಷ್ಟಿಸಲಿದೆ ಎಂದು ಕೃಷಿ ಸಚಿವ ಬಿ.ಸಿ.ಪಾಟೀಲ್ ವಿಶ್ವಾಸ ವ್ಯಕ್ತಪಡಿಸಿದರು.

ವಿಕಾಸಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ‘ಕೃಷಿ ನವೋದ್ಯಮ’ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ, ಇದೇ ಮೊದಲ ಬಾರಿಗೆ ರಾಜ್ಯದಲ್ಲಿ ಕೃಷಿ ಕ್ಷೇತ್ರಕ್ಕೆ ನವಚೈತನ್ಯ ಒದಗಿಸಲು ಕೃಷಿ ನವೋದ್ಯಮಗಳನ್ನು ಆರಂಭಿಸಿ ರೈತರು ಹಾಗೂ ಗ್ರಾಹಕರಿಗೆ ಅನುಕೂಲ ಕಲ್ಪಿಸಲು ವೇದಿಕೆ ಸೃಷ್ಟಿಸಲಾಗಿದೆ. ರಾಜ್ಯದ ಕೈಗಾರಿಕಾ ನೀತಿಯಿಂದಾಗಿ ರಾಜಧಾನಿ ಬೆಂಗಳೂರಿನಲ್ಲಿ ವಾರ್ಷಿಕವಾಗಿ 4000 ನವೋದ್ಯಮ ಆರಂಭಿಸಲು ಅನುಕೂಲವಾಗಿದ್ದು, ಇದರಿಂದ 1.70 ಲಕ್ಷ ಹೊಸ ಉದ್ಯೋಗಗಳು ಸೃಷ್ಟಿಯಾಗಲಿವೆ. ದೇಶದಲ್ಲಿ ಕೃಷಿ ನವೋದ್ಯಮಗಳು ಪ್ರಾರಂಭಿಕ ಹಂತದಲ್ಲಿಯೇ ಹೆಚ್ಚು ಜನರನ್ನು ಆಕರ್ಷಿಸುತ್ತಿವೆ. ಅಂಕಿ ಅಂಶಗಳ ಪ್ರಕಾರ ಪ್ರತಿದಿನ ಎರಡರಿಂದ ಮೂರು ನವೋದ್ಯಮಗಳು ಸ್ಥಾಪನೆಯಾಗುತ್ತಿವೆ. ಆ್ಯಕ್ಸೆಂಚರ್ ಸಂಸ್ಥೆ ನಡೆಸಿದ ಸಮೀಕ್ಷೆಯ ಪ್ರಕಾರ ನಮ್ಮ ದೇಶದಲ್ಲಿ ನವೋದ್ಯಮಗಳಿಂದ 450 ಕೋಟಿ ಡಾಲರ್ (ಸುಮಾರು ರೂ.34000 ಕೋಟಿ ಡಾಲರ್) ಮಾರುಕಟ್ಟೆ ಸೃಷ್ಟಿಯಾಗಲಿದೆ ಎಂದರು.

ಆಧಾರ:ಕನ್ನಡಪ್ರಭ, ದಿನಾಂಕ:27.08.2020